# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಲಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 294 | Pages. 2 | Date: 15-10-2025, WEDNESDAY | RNI NO: KARKAN/2024/89601 | Kannada Daily

ಸಂಪುಟ : 01 – ಸಂಚಿಕೆ : 294 – ಪುಟಗಳು : 2 15-10-2025 ಬುಧವಾರ | Ph: 8762954248 | ದರ : ₹1


# ಹಾಸನಾಂಬ ದರ್ಶನಕ್ಕೆ ಭಕ್ತ ಪ್ರವಾಹ

## 5 ರಿಂದ 6 ಗಂಟೆ ಸರದಿ ಸಾಲಲ್ಲಿ ನಿಂತ ಜನರು | 4.21 ಕೋಟಿ ರೂ. ಆದಾಯ ಸಂಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶಕ್ತಿ ದೇವತೆ ಹಾಸನಾಂಬ ದರ್ಶನಕ್ಕಾಗಿ ಮಂಗಳವಾರ ಭಕ್ತ ಪ್ರವಾಹ ಹರಿದುಬಂತು.

ಸಾಮಾನ್ಯ ಭಕ್ತರು ಮಾತ್ರವಲ್ಲದೆ ವಿಐಪಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬಂದಿದ್ದರಿಂದ ಜನರ ನಿಯಂತ್ರಣಕ್ಕೆ ಪೊಲೀಸರು ಹರಸಾಹಸಪಟ್ಟರು. ಸರದಿ ಸಾಲಿನಲ್ಲಿ ಹೆಚ್ಚು ಹೊತ್ತು ನಿಂತ ವಿಚಾರ ತಿಳಿದ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರೇ ಸ್ಥಳಕ್ಕೆ ಭೇಟಿ ನೀಡಿ ವ್ಯವಸ್ಥೆ ಪರಿಶೀಲಿಸಿದರು.

ವಿಐಪಿಗಳು ಬಂದಾಗ ಸಾಲು ಸಾಗುತ್ತಿಲ್ಲ, ಎರಡು ಗಂಟೆಯಲ್ಲಿ ದರ್ಶನವಾಗುತ್ತದೆಂದು ಹೇಳಿದ್ದಿರಿ, ಸಾವಿರ ರೂ. ಟಿಕೆಟ್ ಪಡೆದು ಮೂರು ಗಂಟೆ ನಿಂತಿದ್ದೇವೆ, ಇನ್ನು ಧರ್ಮದರ್ಶನ ಸಾಲಿನಲ್ಲಿರುವ ಭಕ್ತರು ಐದರಿಂದ ಆರು ತಾಸು ನಿಲ್ಲುವಂತಾಗಿದೆ. ವಿಐಪಿಗಳಿಗೆ ಮಧ್ಯಾಹ್ನ 12.30ರ ಬಳಿಕ ಪ್ರವೇಶವಿಲ್ಲವೆಂಬ ನಿಯಮವಿದ್ದರೂ ಯಾವ ಅಡೆತಡೆ ಇಲ್ಲದೆ ಬಿಡುತ್ತಿದ್ದಾರೆ. ಗಣ್ಯರು ಬಂದಾಗಲೂ ಸಾರ್ವಜನಿಕ ದರ್ಶನ ಸಾಗುತ್ತದೆಂದು ಹೇಳಿದ್ದಿರಿ. ಅದ್ಯಾವ ನಿಯಮವೂ ಇವತ್ತು ಜಾರಿಯಲ್ಲಿಲ್ಲ. ಸರ್ ನಿಮ್ಮ ಮಾತು ನಂಬಿ ಬಂದು ತೊಂದರೆ ಅನುಭವಿಸುವಂತಾಯಿತು ಎಂದು ಸರದಿ ಸಾಲಿನಲ್ಲಿ ನಿಂತಿದ್ದ ಭಕ್ತರು ಒಕ್ಕೊರಲಿನಿಂದ ದೂರುಗಳ ಸುರಿಮಳೆಗೈದರು. ಬ್ರಾಹ್ಮಣರ ಬೀದಿಯಿಂದ ದೇವಾಲಯಕ್ಕೆ ಬಂದ ಸಚಿವರು ಹಾಸನಾಂಬ ದೇವಾಲಯದಿಂದ ಸಿದ್ದೇಶ್ವರಸ್ವಾಮಿ ದೇಗುಲಕ್ಕೆ ಬರಲು ಹಾಕಿರುವ ಬ್ಯಾರಿಕೇಡ್ ಪರಿಶೀಲಿಸಿ ಅದನ್ನು ವಿಸ್ತರಿಸಿದರೆ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸಾಗುತ್ತಾರೆಂದು ಸಲಹೆ ನೀಡಿದರು. ಭಕ್ತರ ನಿಧಾನಗತಿ ನಡಿಗೆಯಿಂದ ಒಂದು ನಿಮಿಷಗಳ ಕಾಲ ಒಳಗೆ ಇರುವಂತಾಗಿದೆ.

ಗರಿಷ್ಠ 20 ಸೆಕೆಂಡ್‌ಗಳಲ್ಲಿ ವ್ಯಕ್ತಿ ಹೊರಗೆ ಬರಬೇಕು. ಎರಡೂ ಬಾಗಿಲುಗಳಿಂದ ವೇಗವಾಗಿ ಸಾಗುವಂತೆ ವ್ಯವಸ್ಥೆ ಮಾಡಬೇಕು. ಮುಂದಿನ ದಿನಗಳಲ್ಲಿ ಭಕ್ತರ ಸಂಖ್ಯೆ ಹೆಚ್ಚುವುದರಿಂದ ಈಗಲೇ ತಯಾರಿ ಮಾಡಿಕೊಳ್ಳಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



### ನಾನುಂಟು ಭಗವಂತ ಉಂಟು

ಮುಖ್ಯಮಂತ್ರಿ ಬದಲಾವಣೆ ವದಂತಿಗೆ ಸಂಬಂಧಿಸಿ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು, ನಾನುಂಟು ಭಗವಂತ ಉಂಟು. ಉತ್ತಮ ಮಳೆಯಾಗಿ ಎಲ್ಲರೂ ಚೆನ್ನಾಗಿರಲಿ ಎಂದು ತಾಯಿ ಹಾಸನಾಂಬೆ ಬಳಿ ಪ್ರಾರ್ಥಿಸಿದ್ದೇನೆ. ಜಿಲ್ಲಾಡಳಿತ ಅಚ್ಚುಕಟ್ಟು ವ್ಯವಸ್ಥೆ ಮಾಡಿದೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರ ಮಾರ್ಗದರ್ಶನದಲ್ಲಿ ಜಾತ್ರೆ ಯಶಸ್ವಿಯಾಗಿ ನೆರವೇರುತ್ತಿದೆ ಎಂದರು.

### ಇಂದು ಸಿಎಂ ಸಿದ್ದರಾಮಯ್ಯ ಆಗಮನ


ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಳಿಗ್ಗೆ ಹಾಸನಾಂಬ ದರ್ಶನಕ್ಕೆ ಆಗಮಿಸುತ್ತಿದ್ದಾರೆ. ಬೆಂಗಳೂರಿನಿಂದ ಹೆಲಿಕಾಪ್ಟರ್‌ನಲ್ಲಿ ಆಗಮಿಸುವ ಅವರು ಬೂವನಹಳ್ಳಿ ಹೆಲಿಪ್ಯಾಡ್‌ನಿಂದ ದೇವಸ್ಥಾನಕ್ಕೆ ಬರಲಿದ್ದಾರೆ. ಬೆಳಿಗ್ಗೆ 11 ರಿಂದ ಮಧ್ಯಾಹ್ನ 12ರ ನಡುವೆ ದರ್ಶನ ಪಡೆಯಲಿರುವ ಮುಖ್ಯಮಂತ್ರಿ ಇಲ್ಲಿಂದ ಮೈಸೂರಿಗೆ ತೆರಳಲಿದ್ದಾರೆ. ಗಣ್ಯರಿಗೆ ನಿಗದಿಪಡಿಸಿರುವ ಶಿಷ್ಟಾಚಾರದ ಸಮಯದಲ್ಲೇ ಸಿದ್ದರಾಮಯ್ಯ ಅವರು ಬರುತ್ತಿರುವುದು ಸಂತಸದ ವಿಚಾರ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಹೇಳಿದರು.

## ನಾಲ್ಕು ಗಂಟೆ ನಿಲ್ಲಲು ಸನ್ನದ್ಧರಾಗಿರಿ: ಕೃಷ್ಣಬೈರೇಗೌಡ

ಹಾಸನ: ದೇವಿ ದರ್ಶನಕ್ಕೆ ಬರುತ್ತಿರುವ ಭಕ್ತರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕನಿಷ್ಟ ನಾಲ್ಕರಿಂದ ಐದು ತಾಸು ಸರದಿ ಸಾಲಿನಲ್ಲಿ ಭಕ್ತರು ನಿಲ್ಲಲು ಮಾನಸಿಕವಾಗಿ ಸಿದ್ಧರಾಗಿರಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಕೋರಿದರು.

ಸಿದ್ದೇಶ್ವರಸ್ವಾಮಿ ದೇವಸ್ಥಾನದಲ್ಲಿ ಮಂಗಳವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಈ ವರ್ಷ ಭಕ್ತರು ಹಾಗೂ ಆದಾಯ ಎರಡೂ ಕಡಿಮೆಯಾಗಬಹುದೆಂಬ ನಿರೀಕ್ಷೆಯಿತ್ತು. ಮಂಗಳವಾರ ಭಕ್ತರ ಸಂಖ್ಯೆ ವಿಪರೀತ ಏರಿಕೆಯಾಗಿದ್ದು ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಬರುತ್ತಾರೆ. 5 ಕಿ.ಮೀ. ನಿಗದಿಪಡಿಸಿದ್ದ ಬ್ಯಾರಿಕೇಡ್ ಅನ್ನು 7 ಕಿ.ಮೀ. ವಿಸ್ತರಿಸಿದ್ದೇವೆ ಎಂದರು.

ಶುಕ್ರವಾರ ಬೆಳಿಗ್ಗೆಯಿಂದ ಮಂಗಳವಾರ ಮಧ್ಯಾಹ್ನ 2ರ ವರೆಗೆ 7.62 ಲಕ್ಷ ಭಕ್ತರು ದೇವಿ ದರ್ಶನ ಪಡೆದಿದ್ದಾರೆ. ಸೋಮವಾರ ಬೆಳಿಗ್ಗೆ 5 ರಿಂದ ಮಂಗಳವಾರ ಬೆಳಿಗ್ಗೆ 5ರ ಅವಧಿಯಲ್ಲಿ ದಾಖಲೆ ಸಂಖ್ಯೆಯಲ್ಲಿ ಭಕ್ತರು ಬಂದಿದ್ದಾರೆ. ಕಳೆದ ವರ್ಷ ಸೋಮವಾರ 1 ಲಕ್ಷ ಭಕ್ತರು ಬಂದಿದ್ದರು. ಈ ಬಾರಿ ಕಳೆದ ವರ್ಷಕ್ಕಿಂತ ಶೇ. 50 ರಷ್ಟು ಹೆಚ್ಚು ಭಕ್ತರು ಬರುವ ಸಾಧ್ಯತೆಯಿದ್ದು ಎಲ್ಲರಿಗೂ ಸುಗಮ ದರ್ಶನಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.



ಟಿಕೆಟ್ ಮತ್ತು ಲಾಡು ಮಾರಾಟದಿಂದ 4,21,07,376 ರೂ. ಆದಾಯ ಸಂಗ್ರಹವಾಗಿದೆ. ಇದೇ ಅವಧಿಗೆ ಕಳೆದ ವರ್ಷ 1 ಕೋಟಿ ರೂ. ಆದಾಯ ಬಂದಿತ್ತು. 1 ಸಾವಿರ ರೂ. ಟಿಕೆಟ್ ಮಂಗಳವಾರ ಬೆಳಿಗ್ಗೆ 5 ರಿಂದ ಮಧ್ಯಾಹ್ನ 2ರ ವರೆಗೆ 3 ಸಾವಿರ ಮತ್ತು 300 ರೂ. ಟಿಕೆಟ್ 6000 ಮಾರಾಟವಾಗಿದೆ ಎಂದು ಮಾಹಿತಿ ನೀಡಿದರು.

ನೈವೇದ್ಯ ಸಮಯದಲ್ಲಿ ಸಾರ್ವಜನಿಕ ದರ್ಶನಕ್ಕೆ ಅವಕಾಶವಿರುವುದಿಲ್ಲ. ಸೋಮವಾರ ರಾತ್ರಿ 12 ಗಂಟೆಗೆ ಭಕ್ತರ ಸಂಖ್ಯೆ ಏಕಾಏಕಿ ಏರಿಕೆಯಾದ್ದರಿಂದ ನೈವೇದ್ಯ ಸಮಯವಾದ ರಾತ್ರಿ 3 ರಿಂದ ಬೆಳಗಿನ ಜಾವ 5ರ ಸಮಯದಲ್ಲೂ ದರ್ಶನಕ್ಕೆ ಅವಕಾಶ ಕಲ್ಪಿಸಲಾಯಿತು. ಆ ಕ್ರಮ ಕೈಗೊಳ್ಳದಿದ್ದರೆ ಭಕ್ತರು ಹೈರಾಣಾಗುತ್ತಿದ್ದರು. ಧಾರ್ಮಿಕ ಕೈಂಕರ್ಯಕ್ಕೆ ಅಡಚಣೆಯಾಗಬಾರದೆಂಬ ಕಾರಣಕ್ಕೆ ಮಂಗಳವಾರ ಮಧ್ಯಾಹ್ನದ ನೈವೇದ್ಯ ಸಮಯದಲ್ಲಿ ದರ್ಶನ ಸ್ಥಗಿತಗೊಳಿಸಲಾಗಿದೆ ಎಂದು ತಿಳಿಸಿದರು.

ಸಂಸದ ಶ್ರೇಯಸ್ ಪಟೇಲ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್ .ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ದೇವಾಲಯ ಆಡಳಿತಾಧಿಕಾರಿ ಮಾರುತಿ ಹಾಜರಿದ್ದರು.

### ದರ್ಶನ ಪಡೆದ ಗಣ್ಯರು

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಸಚಿವರಾದ ಕೆ.ಗೋಪಾಲಯ್ಯ, ಪಿಜಿಆರ್ ಸಿಂಧ್ಯಾ, ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್, ಶಾಸಕರಾದ ಎಸ್.ಸುರೇಶ್, ಹೆಚ್.ಕೆ. ಸುರೇಶ್, ಶ್ರೀನಿವಾಸ್ ಬಸವಗೌಡ ದದ್ದಲ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ, ಟಿ.ಎ.ಶರವಣ, ವಿನಯ್ ಗುರೂಜಿ, ಚಲನಚಿತ್ರ ನಟರಾದ ಪ್ರಥಮ್, ವಸಿಷ್ಠ ಸಿಂಹ, ಪತ್ನಿ ಹರಿಪ್ರಿಯಾ, ಶೋಭರಾಜ್, ಓಂ ಪ್ರಕಾಶ್ ಹಾಸನಾಂಬ ದರ್ಶನ ಪಡೆದರು.

## ಅ.17 ರಿಂದ ನಾಲ್ಕು ದಿನ ಫಲಪುಷ್ಪ ಪ್ರದರ್ಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನಾಂಬ ಹಾಗೂ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ನಗರದ ಸಿಲ್ವರ್ ಜ್ಯೂಬಿಲಿ ಪಾರ್ಕ್‌ನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ತೋಟಗಾರಿಕೆ ಇಲಾಖೆ, ಹೇಮಾವತಿ ತೋಟಗಾರಿಕೆ ಸಂಘ ಹಾಗು ವಿವಿಧ ಇಲಾಖೆಯಿಂದ ಫಲಪುಷ್ಪ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಮಂಗಳವಾರ ಮಾತನಾಡಿ, ಅ. 17ರ ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಫಲಪುಷ್ಪ ಪ್ರದರ್ಶನಕ್ಕೆ ಚಾಲನೆ ನೀಡುವರು. 8000 ಬಗೆಯ ಹೂವಿನ ಗಿಡಗಳನ್ನು ಉದ್ಯಾನವನದಲ್ಲಿ ಬೆಳೆಸಲಾಗಿದೆ. ಮರಗಳ ಸುತ್ತ ಹಾಗೂ ಸಮೂಹಗಳಲ್ಲಿ ಆಕರ್ಷಕವಾಗಿ ಜೋಡಿಸಲಾಗುತ್ತಿದೆಯೆಂದರು.

ಹಾಸನಾಂಬ ಮತ್ತು ಸಿದ್ದೇಶ್ವರಸ್ವಾಮಿ ದೇವಾಲಯದ ರಾಜಗೋಪುರ, ಗರುಡ ಗಂಬ ಮತ್ತು ದೀಪವನ್ನು ವಿವಿಧ ಬಗೆಯ ಹೂವುಗಳಿಂದ ಅಲಂಕರಿಸಿ ಪ್ರದರ್ಶಿಸಲಾಗುತ್ತಿದೆ. ದಿನನಿತ್ಯ ಬಳಸಿ ಎಸೆಯುವ ಪ್ಲಾಸ್ಟಿಕ್, ಡ್ರಮ್, ಟೈರು, ಮರದ ತುಂಡು, ಹಳೆಯ ವಾಹನಗಳು ಇತ್ಯಾದಿ ಅನುಪಯುಕ್ತ ವಸ್ತುಗಳನ್ನು ಎಸೆಯುವುದರಿಂದ ಪರಿಸರಕ್ಕೆ ಹಾನಿಯಾಗುತ್ತದೆ. ಬದಲಾಗಿ ಹಳೆಯ, ಉಪಯೋಗಿಸಿದ ಈ ರೀತಿಯ ಉತ್ಪನ್ನಗಳನ್ನು ಬಳಸಿ ಬಗೆ ಬಗೆಯ ಹೂವುಗಳಿಂದ ಅಲಂಕರಿಸಿ ಪ್ರದರ್ಶಿಸುತ್ತಿದ್ದು, ಜನರಲ್ಲಿ ತ್ಯಾಜ್ಯ ವಸ್ತುಗಳ ಮರುಬಳಕೆಯ ಬಗ್ಗೆ ಜಾಗೃತಿ ಮೂಡಿಸುವ ಪ್ರಯತ್ನ ಮಾಡಲಾಗುತ್ತಿದೆಯೆಂದು ತಿಳಿಸಿದರು.



ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾದ ತೆಂಗು ಇತ್ತೀಚೆಗೆ ಹಲವು ರೋಗಗಳಿಂದ ನಷ್ಟಕ್ಕೀಡಾಗುತ್ತಿದೆ. ಇಳುವರಿ ಕುಂಠಿಗೊಳ್ಳುತ್ತಿದ್ದು, ರೈತರು ಸಂಕಷ್ಟದಲ್ಲಿದ್ದಾರೆ. ಅದರಂತೆ ತೆಂಗು ಬೆಳೆಯಲ್ಲಿ ರೋಗ/ಕೀಟ ನಿರ್ವಹಣೆಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಪ್ರಾತ್ಯಕ್ಷಿಕೆ ಏರ್ಪಡಿಸಿದ್ದು, ತಾಂತ್ರಿಕ ಮಾಹಿತಿ ಪಡೆಯಬಹುದಾಗಿದೆ ಎಂದರು.

ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ ಎಂಬ ಘೋಷವಾಕ್ಯದೊಂದಿಗೆ ನೈಸರ್ಗಿಕ ಸಂಪನ್ಮೂಲಗಳಾದ ಭೂಮಾತೆ, ಸೂರ್ಯ, ಹೇಮಾವತಿ, ನೀರಿನ ಝರಿಗಳನ್ನು ವಿವಿಧ ಬಗೆಯ ಬಣ್ಣ ಬಣ್ಣದ ಹೂವುಗಳಿಂದ ಸಿಂಗರಿಸಿ ಪ್ರದರ್ಶಿಸಲಾಗುವುದು. ಶ್ರೇಷ್ಟ ಕವಿಗಳು, ತಾರೆಯರು, ಗಾಯಕರು ಹಾಗು ಪ್ರಸಿದ್ಧ ರಾಜಕಾರಣಿಗಳ ಭಾವಚಿತ್ರವನ್ನು ತರಕಾರಿ ಕೆತ್ತನೆಯ ಮೂಲಕ ಪ್ರದರ್ಶಿಸಲಾಗುವುದು. ರಾಧಾ-ಕೃಷ್ಣ, ಬಲರಾಮ, ಮಕ್ಕಳಿಗೆ ಪ್ರಿಯವಾದ ಐಸ್ ಕ್ರೀಂ ಕೋನುಗಳ ಮಾದರಿ, ಡಾಲ್ಫಿನ್, ಬಾತುಕೋಳಿಗಳನ್ನು ವಿವಿಧ ಬಗೆಯ ಹೂವುಗಳಿಂದ ಅಲಂಕರಿಸಿ ಪ್ರದರ್ಶಿಸಲಾಗುವುದೆಂದರು.

ಹೇಮಾವತಿ ತೋಟಗಾರಿಕೆ ಸಂಘದ ಉಪಾಧ್ಯಕ್ಷೆ ಸುಜಾತ ನಾರಾಯಣ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಹೆಚ್.ಆರ್. ಯೋಗೇಶ್, ಹೇಮಾವತಿ ತೋಟಗಾರಿಕೆ ಸಂಘದ ಪದನಿಮಿತ್ತ ಕಾರ್ಯದರ್ಶಿಗಳಾದ ಬಿ.ಈ. ಭಾನುಪ್ರಕಾಶ್, ಸಹಾಯಕ ತೋಟಗಾರಿಕೆ ನಿರ್ದೇಶಕಿ ಜಿ.ಎನ್. ಪವಿತ್ರ ಇತರರಿದ್ದರು.

## ಬೇರೆ ಪಕ್ಷ ಸೇರ್ಪಡೆ ನಿರ್ಧಾರ ಮಾಡಿಲ್ಲ: ಯತ್ನಾಳ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಾನು ಯಾವುದೇ ಪಕ್ಷ ಸೇರಲ್ಲ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.

ಮಂಗಳವಾರ ಹಾಸನಾಂಬ ದರ್ಶನದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ,

ಹಿಂದು ಮತ ವಿಭಜನೆ ಆಗಬಾರದು. ನಾನು ಪಕ್ಷ ಕಟ್ಟೋಕೆ ಮುನ್ನ ಮತ ವಿಭಜನೆ ಮಾಡುವ ಕೆಟ್ಟ ಕೆಲಸ ಮಾಡಲ್ಲ. ಆದಾಗ್ಯ ಬಿಜೆಪಿಯವರಿಗೆ ಇನ್ನೂ ಯಡಿಯೂರಪ್ಪ ಕುಟುಂಬವೇ ಬೇಕಾದರೆ ಏನೂ ಮಾಡಲು ಆಗಲ್ಲ. ಯಡಿಯೂರಪ್ಪ ಕುಟುಂಬ ಬಿಟ್ಟು ಬಿಜೆಪಿ ಕಟ್ಟಿದರೆ ಮತ್ತೆ ಹೋಗ್ತೀನಿ ಎಂದರು.

ನಾನು ಯಾವ ರಾಜಕೀಯ ಪಕ್ಷದ ಜೊತೆ ಹೋಗೋದಿಲ್ಲ, ನನ್ನೊಟ್ಟಿಗೆ ಯಾರೂ ಮಾತನಾಡಿಲ್ಲ. ಹಿಂದುತ್ವದ ಪರವಾಗಿ ರಾಜ್ಯಾದ್ಯಂತ ಓಡಾಡುತ್ತಿದ್ದೇನೆ. ಇತ್ತೀಚೆಗೆ ಮಂಡ್ಯಕ್ಕೆ ಹೋಗಿದ್ದೆ. 20 ಸಾವಿರ ಜನ ಸೇರಿದರು. ಜನರು ಹೂ ಹಾಕಿ ನೀವೇ ಮುಂದೆ ಸಿಎಂ ಆದರೆ ಮಾತ್ರ ಹಿಂದುಗಳಿಗೆ ರಕ್ಷಣೆ ಎಂದರು. ಆದರೆ ಯಡಿಯೂರಪ್ಪ ರೀತಿ ನಾನು ಹೇಳಿಕೊಳ್ಳೋದಿಲ್ಲ. ಜನ ಕೊಡುವ ತೀರ್ಪಿಗೆ ತಯಾರಿದ್ದೇನೆ ಎಂದರು. ರಾಜ್ಯದಲ್ಲಿ ನಮ್ಮ ಸರ್ಕಾರ ಬಂದರೆ ಹಿಂದುಗಳ ಮೇಲೆ ದಬ್ಬಾಳಿಕೆ ತಡೆಯುತ್ತೇವೆ, ಅನಧಿಕೃತ ಮಸೀದಿಗಳನ್ನ ತಡೆಯುತ್ತೇವೆ, ಕರ್ನಾಟಕದಲ್ಲಿ ಸಾಕಷ್ಟು ಅಕ್ರಮ ಮಸೀದಿ ಇವೆ. ಅವರು ವಾಟರ್ ಬಿಲ್, ಕರೆಂಟ್ ಬಿಲ್ ಕಟ್ಟಲ್ಲ, ನಮ್ಮ ದೇವರ ದುಡ್ಡನ್ನ ಅವರ ವಕ್ಫ್ ಕಟ್ಟಲುಕೊಡ್ತಾರೆ. ಹಿಂದು ದೇವರ ಹಣ ನಮ್ಮ ದೇವಾಲಯಕ್ಕೆ ಖರ್ಚಾಗಬೇಕು ಎಂದು ಯತ್ನಾಳ್ ಹೇಳಿದರು.



ರಾಜ್ಯದಲ್ಲಿ ಪ್ರತ್ಯೇಕ ಲಿಂಗಾಯತ ಧರ್ಮ ಚರ್ಚೆ ಕುರಿತು ಮಾತನಾಡಿ, ಲಿಂಗಾಯತ-ವೀರಶೈವ ಒಂದೇ, ಬೇರೆ ಬೇರೆ ಅಲ್ಲ, ಮೂಢನಂಬಿಕೆ, ಅಸ್ಪೃಶ್ಯತೆ, ಹೆಣ್ಣು ಮಕ್ಕಳ ಮೇಲಿನ ದೌರ್ಜನ್ಯ ವಿರುದ್ಧ ಬಸವಣ್ಣ ಹೋರಾಟ ಮಾಡಿದ್ದಾರೆ ಎಂದರು.

ಬಸವಣ್ಣ, ಲಿಂಗಾಯತ ಧರ್ಮ ಸ್ಥಾಪನೆ ಮಾಡಿಲ್ಲ. ಅನುಭವ ಮಂಟಪ ಕಟ್ಟಿದ್ರು, ಅಲ್ಲಿ ಅಲ್ಲಮ ಪ್ರಭು ಅಧ್ಯಕ್ಷರಾಗಿದ್ದರು.ಎಲ್ಲ ಸಮುದಾಯದ ಪ್ರತಿನಿದಿಗಳು ಅಲ್ಲಿದ್ದರು.ಸನಾತನ ಧರ್ಮದಲ್ಲಿ ಏನು ಬದಲಾವಣೆ ಆಗಬೇಕೆಂದು ಚಿಂತನೆ ಮಾಡಿದ್ದರು. ಅಲ್ಲಿ ಅಕ್ಕಮಹಾದೇವಿ, ಹರಳಯ್ಯ ಎಲ್ಲ ಇದ್ದರು. ಬಸವಣ್ಣ ಯಾವ ವಚನದಲ್ಲೂ ಹಿಂದು ಸಮಾಜಕ್ಕೆ ಬೈದಿಲ್ಲ. ಎಂ.ಬಿ ಪಾಟೀಲ್, ಈಶ್ವರ್ ಖಂಡ್ರೆ, ಶಾಮನೂರು ಶಿವಶಂಕರಪ್ಪ ಮೊದಲಾದವರು ಸೇರಿ ಧರ್ಮ ಒಡೆದು ತಮ್ಮ ಸಂಸ್ಥೆ ಉಳಿಸಿಕೊಳ್ಳಲು ಹೊರಟಿದ್ದಾರೆ, ದೊಡ್ಡ ದೊಡ್ಡ ಮೆಡಿಕಲ್ ಕಾಲೇಜು ಕಟ್ಟಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ರಾಜ್ಯಾದ್ಯಂತ ಮದ್ಯಪಾನ ನಿಷೇಧವಾಗಬೇಕು

### ಮಾಜಿ ಸಚಿವ ಎಚ್.ಕೆ. ಕುಮಾರಸ್ವಾಮಿ ಆಗ್ರಹ | ಸಕಲೇಶಪುರದಲ್ಲಿ ಗಾಂಧಿ ಸ್ಮರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ರಾಜ್ಯ ಸರ್ಕಾರ ಮದ್ಯಪಾನ ನಿಷೇಧದಂತಹ ಕ್ರಾಂತಿಕಾರಿ ನಿರ್ಣಯ ಕೈಗೊಳ್ಳಬೇಕು ಎಂದು ಮಾಜಿ ಸಚಿವ ಎಚ್.ಕೆ. ಕುಮಾರಸ್ವಾಮಿ ಆಗ್ರಹಿಸಿದರು.

ಮಹತ್ಮಾ ಗಾಂಧಿ ಅವರ 156ನೇ ಜಯಂತಿ ಅಂಗವಾಗಿ ಮಂಗಳವಾರ ಪಟ್ಟಣದ ಪುರಭವನದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ರೋಟರಿ ಕ್ಲಬ್, ಲಯನ್ಸ್ ಸೇವಾ ಸಂಸ್ಥೆ, ತಾಲ್ಲೂಕು ಆರೋಗ್ಯ ಇಲಾಖೆ, ಜಿಲ್ಲಾ ಬಂಟರ ಸಂಘ ಹಾಗೂ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಿಂದ ಹಮ್ಮಿಕೊಂಡಿದ್ದ, ಗಾಂಧಿ ಸ್ಮರಣೆ ಹಾಗೂ ಜನಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿ, ಸರ್ಕಾರಗಳು ಗಾಂಧಿ ಹೆಸರು ಹೇಳುತ್ತಾ ಅವರ ತತ್ವಗಳನ್ನು ಗಾಳಿಗೆ ತೋರುತ್ತಿವೆ. ಮದ್ಯಪಾನ ಮಾಡುವುದು ಕುಟುಂಬಕ್ಕೆ, ಸಮಾಜಕ್ಕೆ ಮಾರಕ ಎಂಬುದನ್ನು ಗಾಂಧೀಜಿ ಪ್ರತಿಪಾದಿಸಿದ್ದರು. ಆದರೆ, ಇಂದು ಅಧಿಕಾರದಲ್ಲಿರುವ ಸರ್ಕಾರಗಳು ಅಬಕಾರಿ ಇಲಾಖೆಯಿಂದ ಬರುವ ವರಮಾನ ಅವಲಂಬಿಸಿವೆ. ಪ್ರತಿ ತಿಂಗಳು ಅಬಕಾರಿ ಇಲಾಖೆಯಿಂದ ವರಮಾನ ಹೆಚ್ಚುವಂತೆ ಮಾಡುವ ಮೂಲಕ ಪರೋಕ್ಷವಾಗಿ ಜನರನ್ನು ದುಶ್ಚಟಗಳಿಗೆ ದೂಡುವ ಮೂಲಕ ಗಾಂಧಿ ತತ್ವಗಳನ್ನು ಮೂಲೆಗುಂಪು ಮಾಡುತ್ತಿವೆ. ಈ ಮಧ್ಯೆ ಧರ್ಮಸ್ಥಳ ಸ್ವಸಹಾಯ ಸಂಘ ಮದ್ಯಪಾನ ಚಟದಿಂದ ಹೊರತರುವ ಕೆಲಸದಲ್ಲಿ ತೊಡಗಿಕೊಂಡಿರವುದು ಶ್ಲಾಘನೀಯ ಎಂದರು.



ಮಾಜಿ ಶಾಸಕ ಎಚ್.ಎಂ. ವಿಶ್ವನಾಥ್ ಮಾತನಾಡಿ, ದೀರ್ಘಕಾಲ ಬದುಕಬೇಕಾದರೆ ದುಶ್ಚಟಗಳಿಂದ ದೂರ ಇರಬೇಕು. ಇಂದು ಮುಪ್ಪಿಗೂ ಮುನ್ನವೇ ಮರಣ ಹೊಂದುವವರ ಸಂಖ್ಯೆ ಅಧಿಕವಾಗಿದೆ. ದೇಶದಲ್ಲಿ ಶತಾಯುಷಿಗಳ ಸಂಖ್ಯೆ ಕ್ಷೀಣವಾಗಿದೆ. ತಿನ್ನುವ ಆಹಾರದಿಂದ ಎಲ್ಲವೂ ವಿಷಮಯವಾಗಿದೆ. ಸ್ವಂತ ಬೆಳೆದ ಆಹಾರ ಸೇವಿಸುವುದರಿಂದ ಮಾತ್ರ ಆರೋಗ್ಯವಾಗಿರಬಹುದು. ಆರೋಗ್ಯವಂತವಾಗಿರುವುದೆ ಅದೃಷ್ಟದ ಲಕ್ಷಣ. ದುಶ್ಚಟಗಳು ಮನೆ, ಮನಕ್ಕೆ ಮಾರಕವಾದ್ದರಿಂದ ದುಶ್ಚಟಗಳಿಂದ ದೂರ ಇರುವುದು ಉತ್ತಮ ಎಂದರು.

ಮಾದಕ ವಸ್ತುಗಳು ಹಲವು ಕುಟುಂಬಗಳ ನೆಮ್ಮದಿ ಕದಡಿವೆ. ಆದ್ದರಿಂದ ದೇಶದಿಂದ ಮಾದಕ ವಸ್ತುಗಳನ್ನು ಕಿತ್ತೆಸೆಯುವ ಕೆಲಸವಾಗಬೇಕು. ಮಹಿಳೆಯರು ತಮ್ಮ ಕುಟುಂಬ ಸದಸ್ಯರು ದುಶ್ಚಟಗಳ ದಾಸರಾಗದಂತೆ ಕಾಪಾಡುವ ಕೆಲಸ ಮಾಡಬೇಕು ಎಂದರು.

ಪುರಸಭೆ ಅಧ್ಯಕ್ಷೆ ಜ್ಯೋತಿ ರಾಜ್ ಕುಮಾರ್ ಮಾತನಾಡಿ, ಡಿಜಿಟಲ್ ಯುಗದಲ್ಲಿ ಪುಟ್ಟ ಮಕ್ಕಳು ಸ್ಮಾರ್ಟ್ ಫೋನ್ ವ್ಯಸನಿಗಳಾಗಿದ್ದಾರೆ. ಹೊರಗಡೆ ಆಟವಾಡಲು ಹೋಗುವ ಬದಲು ಮೊಬೈಲ್ ನೋಡುತ್ತಲೇ ಸಮಯ ಕಳೆಯುತ್ತಾರೆ. ಪೋಷಕರು ಸಹ ಮಕ್ಕಳು ಅತ್ತರೆ ಅಥವಾ ಅವರು ಊಟ ಮಾಡಲ್ಲ ಎಂದು ಹಠ ಮಾಡಿದಾಗ ಮೊಬೈಲ್ ಕೊಟ್ಟು ಬಿಡುತ್ತಾರೆ. ಹೀಗೆ ಹೆಚ್ಚು ಮಕ್ಕಳಿಗೆ ಮೊಬೈಲ್ ಕೊಡುವುದರಿಂದ ಚಿಕ್ಕ ಮಕ್ಕಳಲ್ಲಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದೆ ಎಂದು ಹೇಳಿದರು.

ಕಾಂಗ್ರೆಸ್ ಮುಖಂಡ ಮುರುಳಿ ಮೋಹನ್, ಜಿಲ್ಲಾ ಜನಜಾಗೃತಿ ವೇದಿಕೆ ಮಾಜಿ ರಾಜ್ಯಾಧ್ಯಕ್ಷ ಹೊನ್ನವಳ್ಳಿ ಸತೀಶ್, ಜಿಲ್ಲಾ ಜನಜಾಗೃತಿ ವೇದಿಕೆ ಜಿಲ್ಲಾಧ್ಯಕ್ಷ ಡಾ. ನವೀನ್ ಚಂದ್ರಶೆಟ್ಟಿ, ಲಯನ್ಸ್ ಸಂಸ್ಥೆ ಅಧ್ಯಕ್ಷ ಗಿರೀಶ್ ಮಂಜುನಾಥ್, ಚನ್ನವೇಣಿ ಎಂ. ಶೆಟ್ಟಿ, ಜೈ ಭೀಮ್ ಮಂಜುನಾಥ್, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಯೋಜನಾಧಿಕಾರಿ ರಾಜೇಶ್ ಮುಂತಾದವರಿದ್ದರು.

## ಶಿಲುಬೆ ಬೆಟ್ಟದಲ್ಲಿ ಕಲ್ಲು ಕ್ವಾರಿ ಬಂದ್ ಮಾಡಲು ರೈತ ಸಂಘ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಜನವಸತಿ ಪ್ರದೇಶದಲ್ಲಿ ಕಲ್ಲು ಕ್ವಾರಿ ನಡೆಸುತ್ತಿರುವುದನ್ನು ನಿಲ್ಲಿಸಿ ಸಾರ್ವಜನಿಕರಿಗೆ ಹಾಗೂ ಕಾಡುಪ್ರಾಣಿಗಳಿಗೆ ತೊಂದರೆಯಾಗುವುದನ್ನು ತಪ್ಪಿಸುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ರೈತ ಸಂಘದ ಅಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಆಗ್ರಹಿಸಿದರು.

ತಾಲ್ಲೂಕಿನ ಕೆ. ಹೊಸಕೋಟೆ ಹೋಬಳಿ ಹೊಸಮಠ ಗ್ರಾಮದಲ್ಲಿರುವ ಶಿಲುಬೆ ಬೆಟ್ಟದಲ್ಲಿ ಅಕ್ರಮ ಕಲ್ಲು ಕ್ವಾರಿ ವಿರೋಧಿಸಿ ಅಕ್ಕ ಪಕ್ಕದ ಗ್ರಾಮಸ್ಥರು ನಡೆಸುತ್ತಿರುವ ಪ್ರತಿಭಟನೆಗೆ ಸಾಥ್ ನೀಡಿ ಮಾತನಾಡಿದ ಅವರು, ಕಾಡಾನೆಗಳು ಸಂಚರಿಸುವ ಸೂಕ್ಷ್ಮ ಪ್ರದೇಶದಲ್ಲಿ ಡೈನಮೆಟ್ ಬಳಸಿ ಕ್ವಾರಿ ನಡೆಸಲು ಅಧಿಕಾರಿಗಳು ಅನುಮತಿ ನೀಡಿದ್ದಾರೆ. ವ್ಯಾಪ್ತಿಯಲ್ಲಿ ಹಲವಾರು ಮನೆಗಳಿವೆ. ಡೈನಾಮೆಟ್ ಸ್ಫೋಟದಿಂದ ಮನೆಗಳು ಬಿರುಕು ಬಿಟ್ಟಿದ್ದು, ಗ್ರಾಮಸ್ಥರು ಆತಂಕಕ್ಕೆ ಒಳಗಾಗಿದ್ದಾರೆ ಎಂದರು.



ರೈತ ಸಂಘದ ಜಿಲ್ಲಾಧ್ಯಕ್ಷ ಬಾಬು ಮಾತನಾಡಿ, ಈ ಭಾಗದಲ್ಲಿ ಅಕ್ರಮ ಗಣಿಗಾರಿಕೆಯಿಂದಾಗಿ ಹಲವಾರು ಮನೆಗಳಿಗೆ ಹಾನಿ ಉಂಟಾಗಿದೆ. ಕಾಡು ಪ್ರಾಣಿಗಳು ಸ್ಫೋಟಕಗಳ ಶಬ್ದಕ್ಕೆ ಹೆದರಿ ಗ್ರಾಮಗಳಿಗೆ ನುಗ್ಗುತ್ತಿವೆ. ಇಲ್ಲಿಯ ಗಣಿಗಾರಿಕೆಯನ್ನು ನಿಲ್ಲಿಸಬೇಕೆಂದು ಒತಾಯಿಸಿ ಹಲವು ಬಾರಿ ಮನವಿ ಮಾಡಿದರೂ ಪ್ರಯೋಜನವಾಗಿಲ್ಲವೆಂದರು.

ರೈತ ಸಂಘದ ರಾಜ್ಯ ಸಂಚಾಲಕ ಮಹಮ್ಮದ್ ಸಾಧಿಕ್, ಕರವೇ ಜಿಲ್ಲಾ ಉಪಾಧ್ಯಕ್ಷ ವೆಂಕಟೇಶ್, ಪ್ರಧಾನ ಕಾರ್ಯದರ್ಶಿ ಅರುಣ ಭಾಸ್ಕರ್, ಆಲೂರು ತಾಲ್ಲೂಕು ಅಧ್ಯಕ್ಷ ರಾಘವೇಂದ್ರ, ಸಕಲೇಶಪುರ ತಾಲ್ಲೂಕು ಅಧ್ಯಕ್ಷ ರಮೇಶ್ ಪೂಜಾರಿ, ದುದ್ದ ರೇವಣ್ಣ, ಸತೀಶ್ ದುದ್ದ, ಮಂಜೇಗೌಡ, ಸಂಜು ಇತರರಿದ್ದರು.

# ಪಿಎಲ್‌ಡಿ ಬ್ಯಾಂಕ್ ಆಡಳಿತ ಜೆಡಿಎಸ್ ತೆಕ್ಕೆಗೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಇಲ್ಲಿನ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಎಚ್.ಎಂ. ದಿನೇಶ್ ಹಾಗೂ ಉಪಾಧ್ಯಕ್ಷರಾಗಿ ತೀರ್ಥ ಕುಮಾರ್ ಆಯ್ಕೆಯಾದರು.

ಬ್ಯಾಂಕ್ ಸಭಾಂಗಣದಲ್ಲಿ ನಡೆದ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ ಚುನಾವಣೆಗೆ ಅಧ್ಯಕ್ಷ ಸ್ಥಾನಕ್ಕೆ ಹೆಚ್.ಎಂ. ದಿನೇಶ್ ಮತ್ತು ಎಸ್.ಹೆಚ್. ರಾಜಶೇಖರ್ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ತೀರ್ಥ ಕುಮಾರ್ ನಾಮಪತ್ರ ಸಲ್ಲಿಸಿದರು.

ಒಟ್ಟು 15 ಜನ ನಿರ್ದೇಶಕರಿದ್ದು ಎಚ್.ಎಂ. ದಿನೇಶ್ 10 ಮತ ಪಡೆದರೆ ಎಸ್.ಎಚ್. ರಾಜಶೇಖರ್



5 ಮತ ಪಡೆದಿದ್ದರಿಂದ 5 ಮತಗಳ ಅಂತರದಿಂದ ಜಯಗಳಿಸಿದ್ದಾರೆ. ಉಪಾಧ್ಯಕ್ಷರಾಗಿ ತೀರ್ಥಕುಮಾರ್ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಘೋಷಿಸಿದರು.

ಸಭೆಯಲ್ಲಿ ಆಡಳಿತ ಮಂಡಳಿ ನಿರ್ದೇಶಕರಾದ ಹೆಚ್.ವಿ. ಶಿವಶಂಕರ್, ಕಾತ್ಯಾಯಿನಿ, ಮುಗಪ್ಪಗೌಡ, ನಿಂಗರಾಜು, ಹಿರಿಯಣ್ಣಗೌಡ, ವಸಂತ್ ಕುಮಾರ್, ಎಸ್.ಎ. ರಮೇಶ್, ಗಂಗಮ್ಮ, ಜಯಶಂಕರ್, ಧನಂಜಯಮೂರ್ತಿ, ಎಸ್.ಎಸ್. ರಾಜಶೇಖರ್, ನಾಮನಿರ್ದೇಶಿತ ಸದಸ್ಯ ಶ್ರೀನಿವಾಸ್ ಇದ್ದರು.

ಬ್ಯಾಂಕ್ ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಮಾತನಾಡಿದ ಎಚ್.ಎಂ. ದಿನೇಶ್, ಹಲವಾರು ದಶಕಗಳಿಂದ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಅನುಯಾಯಿಯಾಗಿದ್ದ ನನಗೆ ಬ್ಯಾಂಕ್‌ನ ಅಧ್ಯಕ್ಷ ಸ್ಥಾನ ದೊರಕಲು ಸಾಧ್ಯವಾಯಿತು. ಹಾಸನ ಜಿಲ್ಲೆಯ ಅಭಿವೃದ್ಧಿ ಹರಿಕಾರರಾದ ಮಾಜಿ ಸಚಿವ ಹೆಚ್.ಡಿ. ರೇವಣ್ಣ ಮತ್ತು ಮಾಜಿ ಶಾಸಕ ಕೆ.ಎಸ್.ಲಿಂಗೇಶ್ ಅವರ ಮಾರ್ಗದರ್ಶನದಲ್ಲಿ ಕೆಲಸ ಮಾಡುತ್ತೇನೆಂದರು.

ಹೆಚ್‌ಡಿಸಿಸಿ ಬ್ಯಾಂಕ್ ನಿರ್ದೇಶಕ ಎಂ.ಎ. ನಾಗರಾಜ್ ಮಾತನಾಡಿ, ಜೆಡಿಎಸ್ ಮತ್ತು ಬಿಜೆಪಿ ಬೇಲೂರು ತಾಲ್ಲೂಕಿನಲ್ಲಿ ಸದೃಢವಾಗಿದ್ದು ಈ ದಿನ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ದಿನೇಶ್ ಅಧ್ಯಕ್ಷರಾಗಿ 5 ಮತಗಳ ಅಂತರದಿಂದ ಜಯಶೀಲರಾಗಿದ್ದು ಅತ್ಯಂತ ಸಂತೋಷವಾಗಿದೆ. ಜೆಡಿಎಸ್ ಮತ್ತು ಬಿಜೆಪಿ ಭದ್ರಕೋಟೆಯಾಗಿರುವ ಬೇಲೂರು ವಿಧಾನಸಭಾ ಕ್ಷೇತ್ರದಲ್ಲಿ ಮುಂಬರುವ ಎಲ್ಲಾ ಚುನಾವಣೆಗಳಲ್ಲೂ ಜಯಶೀಲರಾಗಿ ತಾಲೂಕಿನ ಅಭಿವೃದ್ಧಿಗೆ ಮುಂದಾಗುತ್ತೇವೆ ಎಂದು ಹೇಳಿದರು.


ಮಾಜಿ ಶಾಸಕ ಕೆ ಎಸ್ ಲಿಂಗೇಶ್ ಜೆಡಿಎಸ್ ಮುಖಂಡರಾದ ಬಲ್ಲೇನಹಳ್ಳಿ ರವಿಕುಮಾರ್ ಅಶ್ವತ್ ಬಾಣಸಬಳ್ಳಿ ಸೇರಿದಂತೆ ನೂರಾರು ಜೆಡಿಎಸ್ ಮುಖಂಡರು ಬಿಜೆಪಿ ಮುಖಂಡರು ಇದ್ದರು.

# ಮಲಗಿದ ಜಾಗದಿಂದ ಮಗು ನಾಪತ್ತೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಹೊಸ ಬಸ್ ನಿಲ್ದಾಣ ಎದುರಿನ ಸೇತುವೆ ಕೆಳಗಡೆ ತಂದೆ-ತಾಯಿ ಜೊತೆ ಮಲಗಿದ್ದ ಮೂರುವರೆ ವರ್ಷದ ಮಗು ನಾಪತ್ತೆಯಾಗಿದ್ದು ಅಪಹರಣದ ಶಂಕೆ ವ್ಯಕ್ತವಾಗಿದೆ.

ಮುರುಳಿ ಹಾಗೂ ಲಕ್ಷ್ಮೀ ಎಂಬುವವರ ಮಗು ಮನೋಜ್ ನಾಪತ್ತೆಯಾಗಿದೆ. ಸ್ವಂತ ಸೂರಿಲ್ಲದೆ ಬೀರನಹಳ್ಳಿ ಕೆರೆಯಲ್ಲಿ ಗುಡಿಸಲು ಕಟ್ಟಿಕೊಂಡಿದ್ದ ದಂಪತಿ ಕಳೆದ ಮೂರು ತಿಂಗಳಿಂದ ಬಸ್ ನಿಲ್ದಾಣದ ಸೇತುವೆ ಕೆಳಗಡೆ ಮಲಗುತ್ತಿದ್ದರು. ಕೂಲಿ ಕೆಲಸ ಮಾಡಿಕೊಂಡಿದ್ದ ಅವರು ಬಾಡಿಗೆ ಮನೆ ಹೊಂದಲು ಆರ್ಥಿಕ ಸ್ಥಿತಿವಂತರಾಗಿಲ್ಲ.



ಭಾನುವಾರ ರಾತ್ರಿ ಮೂವರು ಒಟ್ಟಿಗೆ ಮಲಗಿದ್ದರು. ರಾತ್ರಿ 1 ಗಂಟೆಗೆ ಲಕ್ಷ್ಮೀ ನೀರು ಕುಡಿಯುವುದಕ್ಕಾಗಿ ಎದ್ದಾಗ ಮಗು ಮಲಗಿತ್ತು. ಬೆಳಿಗ್ಗೆ 4 ಗಂಟೆಗೆ ನೋಡಿದಾಗ ಮಗು ಇಲ್ಲದಿರುವುದು ಗೊತ್ತಾಗಿದೆ. ತಕ್ಷಣವೇ ಎಲ್ಲಾ ಕಡೆ ಹುಡುಕಿದರೂ ಸಿಕ್ಕಿಲ್ಲ. ಮಾರ್ಗದಲ್ಲಿ ಸಿಸಿಟಿವಿ ಕ್ಯಾಮರಾ ಇಲ್ಲದಿರುವುದು ಹಾಗೂ ರಾತ್ರಿಯಾದ್ದರಿಂದ ಮಗುವಿನ ಹುಡುಕಾಟಕ್ಕೆ ತೊಡಕಾಗಿದೆ. ಮಗುವನ್ನು ಯಾರಾದರೂ ಅಪಹರಿಸಿದರೇ ಎಂಬ ಆತಂಕವು ಪೋಷಕರನ್ನು ಕಾಡುತ್ತಿದೆ. ಮೂರುವರೆ ವರ್ಷದ ಮನೋಜ್, 2.10 ಅಡಿ ಎತ್ತರ, ಸಾಧಾರಣ ಮೈ ಕಟ್ಟು, ದುಂಡು ಮುಖ, ಎಡ ಮೂಗಿನ ಹತ್ತಿರ ಸುಟ್ಟ ಗಾಯ ಕಲೆ ಇದೆ. ಮಗು ಬಿಳಿ ಬಣ್ಣದ ಜರ್ಕಿನ್ ಹಾಗು ಪ್ಯಾಂಟ್ ಧರಿಸಿದೆ. ಈತನ ಸುಳಿವು ಸಿಕ್ಕರೆ ಹಾಸನ ನಗರ ಠಾಣೆ ದೂ.ಸಂ. 08172-268333 ಅಥವಾ 9480804745 ಇಲ್ಲಿಗೆ ಸಂಪರ್ಕಿಸಲು ತಿಳಿಸಿದೆ.

# ಟಿಎಪಿಸಿಎಂಎಸ್ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತರಿಗೆ ಗೆಲುವು ಖಚಿತ

ಚನ್ನರಾಯಪಟ್ಟಣ: ಟಿಎಪಸಿಎಂಎಸ್ ಚುನಾವಣೆ ಅ. 19ರ ಭಾನುವಾರ ನಡೆಯಲಿದ್ದು ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳು ಷೇರುದಾರ ರೈತರ ಆಶೀರ್ವಾದದಿಂದ ಹೆಚ್ಚಿನ ಬಹುಮತಗಳೊಂದಿಗೆ ಜಯಗಳಿಸಲಿದ್ದಾರೆ ಎಂದು ರಾಜ್ಯ ಸಹಕಾರ ಮಹಾಮಂಡಲದ ನಿರ್ದೇಶಕ ಸಿ.ಎನ್.ಪುಟ್ಟಸ್ವಾಮಿಗೌಡ ವಿಶ್ವಾಸ ವ್ಯಕ್ತಪಡಿಸಿದರು.

ತಾಲ್ಲೂಕಿನ ಕಬ್ಬಳಿ ಬಸವೇಶ್ವರ ಸ್ವಾಮಿ ದೇವಾಲಯದಲ್ಲಿ ಪ್ರಚಾರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಪಟ್ಟಣದ ಗಣಪತಿ ಪೆಂಡಾಲ್‌ನ ಪೇಟೆ ಸರ್ಕಾರಿ ಪ್ರೌಢ ಶಾಲೆಯಲ್ಲಿ ಮತದಾನ ನಡೆಯಲಿದೆ. ಜೆಡಿಎಸ್ ಬೆಂಬಲಿತ 7 ಅಭ್ಯರ್ಥಿಗಳು ಗೆಲುವು ಸಾಧಿಸುತ್ತಾರೆ ಎಂದರು.

ನಷ್ಟದಲ್ಲಿದ್ದ ಟಿಎಪಿಎಂಎಸ್ ಅನ್ನು ಕ್ಷೇತ್ರ ಶಾಸಕ ಸಿ.ಎನ್. ಬಾಲಕೃಷ್ಣ ಹಾಗೂ ತಮ್ಮ ಸಹಕಾರ ಮತ್ತು ಎಲ್ಲಾ ಸದಸ್ಯರ ಹಾಗೂ ಷೇರುದಾರ ರೈತರ ಸಹಕಾರದಿಂದ ಪ್ರಸ್ತುತ ಲಾಭದಲ್ಲಿದೆ. ಮುಂಬರುವ ದಿನಗಳಲ್ಲಿ ಉತ್ತಮ ಆಡಳಿತ ದೃಷ್ಟಿಯಿಂದ ಸಂಘದ



ಸದಸ್ಯರು ಕಣದಲ್ಲಿರುವ ಜೆಡಿಎಸ್ ಪಕ್ಷದ ಅಭ್ಯರ್ಥಿಗಳಿಗೆ ಹೆಚ್ಚಿನ ಮತ ನೀಡುವ ಮೂಲಕ ಆಶೀರ್ವದಿಸುವಂತೆ ಮತದಾರರಲ್ಲಿ ಮನವಿ ಮಾಡಿದರು. ಟಿಎಪಿಎಂಎಸ್ ಮಾಜಿ ಅಧ್ಯಕ್ಷ ಮರಗೂರು ಅನಿಲ್ ಕುಮಾರ್ ಮಾತನಾಡಿ, ಈಗಾಗಲೇ ಒಟ್ಟು 14 ಸ್ಥಾನಗಳ ಪೈಕಿ 7 ಸ್ಥಾನಗಳಲ್ಲಿ ಜೆಡಿಎಸ್ ಅಭ್ಯರ್ಥಿಗಳು ಅವಿರೋಧ ಆಯ್ಕೆಗೊಂಡಿದ್ದಾರೆ. ಉಳಿದ 7 ಸ್ಥಾನಗಳಿಗೆ ಅ. 19ರಂದು ಚುನಾವಣೆ ನಡೆಯಲಿದೆ. ಉತ್ತಮ ಆಡಳಿತದ ದೃಷ್ಟಿಯಿಂದ ಈ ಬಾರಿಯ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳಿಗೆ ಆಶೀರ್ವಾದ ಮಾಡಬೇಕು ಎಂದು ಕೋರಿದರು.

ಟಿಎಪಿಎಂಎಸ್ ಮಾಜಿ ಅಧ್ಯಕ್ಷ ಕುಂಬಾರಹಳ್ಳಿ ರಮೇಶ್ ಹಾಗೂ ನೂತನ ನಿರ್ದೇಶಕ ತೋಟಿ ನಾಗರಾಜ್ ಮಾತನಾಡಿದರು. ಜೆಡಿಎಸ್ ಪಕ್ಷದ ಅಭ್ಯರ್ಥಿಗಳಾದ ಸಾಮಾನ್ಯ ಕ್ಷೇತ್ರದಿಂದ ಎಂ.ಆರ್. ಅನಿಲ್‌ಕುಮಾರ್, ನಂಜುಂಡೇಗೌಡ, ಬಿಸಿಎಂ ಬಿ ಕ್ಷೇತ್ರದಿಂದ ಕುಂಬಾರಹಳ್ಳಿ ರಮೇಶ್, ಸಾಮಾನ್ಯ ಮಹಿಳಾ ಕ್ಷೇತ್ರದಿಂದ ಮಮತಾ ಜಯಣ್ಣ, ಎಂ.ತಾರಾಮಣಿ, ಸಿ.ಎನ್.ಆನಂದ್, ಬಿಸಿಎಂ ಎ ಕ್ಷೇತ್ರದಿಂದ ಮೀಸೆ ಜಗದೀಶ್, ಪರಿಶಿಷ್ಟ ಜಾತಿ ಕ್ಷೇತ್ರದಿಂದ ಕುಂಬಾರಹಳ್ಳಿ ಕೆ.ಆರ್.ರವಿಕುಮಾರ್, ಉಳಿದ 7 ಸ್ಥಾನಗಳಿಗೆ ಸ್ಪರ್ಧೆ ಮಾಡಲಿದ್ದಾರೆ.

ನೂತನ ನಿರ್ದೇಶಕರಾದ ಮೆಡಿಕಲ್ ವೆಂಕಟೇಶ್, ಲಾಯರ್ ಬೋರೇಗೌಡ, ಕೃಷ್ಣೇಗೌಡ, ನಾಗರಾಜ್ ನೆಟ್ಟೆಕೆರೆ, ಉಮೇಶ್, ಮುಖಂಡರಾದ ಬೋರ್ ವೆಲ್ ಜಯಣ್ಣ, ತರಬೇನಹಳ್ಳಿ ನಂಜುಂಡೇಗೌಡ, ವಾಸು, ಕುಳೇಗೌಡ ಹಾಗೂ ಇತರರಿದ್ದರು.

# ಪೆಂಡಾಲ್ ಗಣಪತಿ ಅದ್ದೂರಿ ವಿಸರ್ಜನಾ ಮೆರವಣಿಗೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಪಟ್ಟಣದ ಶ್ರೀ ಪ್ರಸನ್ನ ಗಣಪತಿ ಸೇವಾ ಸಮಿತಿಯು ಶ್ರೀ ಪ್ರಸನ್ನ ಗಣಪತಿ ಆಸ್ಥಾನ ಮಂಟಪದಲ್ಲಿ ಪ್ರತಿಷ್ಠಾಪಿಸಿದ್ದ ಗಣಪತಿ ಮೂರ್ತಿ ವಿಸರ್ಜನಾ ಮಹೋತ್ಸವ ಅದ್ದೂರಿಯಾಗಿ ನೆರವೇರಿತು.

74 ವರ್ಷಗಳ ಇತಿಹಾಸ ಹೊಂದಿರುವ ಶ್ರೀ ಪ್ರಸನ್ನ ಗಣಪತಿ ಸೇವಾ ಸಮಿತಿಯವರು ಪ್ರತಿಷ್ಠಾಪಿಸಿರುವ ಪ್ರಸನ್ನ ಗಣಪತಿ ವಿಸರ್ಜನಾ ಮಹೋತ್ಸವಕ್ಕೆ ಶಾಸಕ ಸಿ.ಎನ್. ಬಾಲಕೃಷ್ಣ ತಮಟೆ ಬಾರಿಸುವ ಮೂಲಕ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಭಾರತ ಧರ್ಮಾಧ ಆಧಾರದ ಮೇಲೆ ಸದೃಢವಾಗಿ ಬೆಳೆದಿರುವ ದೇಶ. ದೇಶದ ಆಚಾರ-ವಿಚಾರ, ಸಂಸ್ಕೃತಿ ಮುಂದುವರಿಸುತ್ತಿರುವುದು ಸಂತಸ ತಂದಿದೆ. ಸನಾತನ ಧರ್ಮದ ಆಚರಣೆಗೆ ಇಂತಹ ಧಾರ್ಮಿಕ ಆಚರಣೆಗಳು ಶಕ್ತಿ



ನೀಡುತ್ತವೆ. ಸರ್ವರ ಸಹಕಾರದಿಂದ ಚನ್ನರಾಯಪಟ್ಟಣದ ಶ್ರೀ ಪ್ರಸನ್ನ ಗಣಪತಿ ಸೇವಾ ಸಮಿತಿ 48 ದಿನಗಳ ಕಾಲ ಗಣಪತಿ ಪ್ರತಿಷ್ಠಾಪಿಸಿ ನಿತ್ಯ ಅನ್ನ ದಾಸೋಹದ ಪ್ರಸಾದ ವಿನಿಯೋಗದ ಸೇರಿ ದೇಶದ ಸಂಸ್ಕೃತಿ ಬಿಂಬಿಸುವಂತಹ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಿ ವಿಶ್ವ ವಿಖ್ಯಾತ ದಸರಾ ಮಹೋತ್ಸವದ ರೀತಿಯಲ್ಲಿ ಗಣೇಶೋತ್ಸವದ ಮೂಲಕ ಕರ್ನಾಟಕದಲ್ಲಿ ಹೆಸರುವಾಸಿಯಾಗಿದೆ ಎಂದರು.

ವಿಸರ್ಜನಾ ಪೂಜೆ ನಂತರ ಪಟ್ಟಣದ ಗಣಪತಿ ಪೆಂಡಾಲಿನಿಂದ ವಿಸರ್ಜನಾ ಮೆರವಣಿಗೆ ಆರಂಭವಾಯಿತು. ಕಲಾವಿದ ರವೀಂದ್ರ ನಿರ್ಮಿಸಿದ ವಿಶೇಷ ದರ್ಬಾರ್ ಪುಷ್ಪ ಮಂಟಪದಲ್ಲಿ ಶ್ರೀಯವರನ್ನು ಕೂರಿಸಿ ಮಹಿಳಾ ತಂಡದಿಂದ ಸ್ಯಾಕ್ಸೋಫೋನ್ ಮಂಗಳವಾದ್ಯ, ಕಾಡು ಸಿದ್ದೇಶ್ವರ ಮಠದ ಆನೆ,

ಚಾಮುಂಡೇಶ್ವರಿ ರಥ, ಕೇರಳದ ಚಂಡೆ ವಾದ್ಯ, ಕೇರಳದ ನರ್ತಕಿಯರು, ಕೇರಳದ ಯಕ್ಷಗಾನ, ಕೇರಳದ ಹುಲಿ, ಪೂಜಾ ಕುಣಿತ, ವೀರಭದ್ರನ ಕುಣಿತ, ಭದ್ರಕಾಳಿ ನರ್ತನ, ನಂದಿ ಧ್ವಜ, ಸಾಗರದ ಡೊಳ್ಳು ಕುಣಿತ, ಶ್ರೀ ವೆಂಕಟೇಶ್ವರ ದರ್ಶನ, ಕೋಟೆ ಮಾರಮ್ಮ, ಶ್ರೀ ಕೋಟೆ ಚಂದ್ರಮೌಳೇಶ್ವರ, ಮೇಗಲಗೇರಿ ಕಾಡು ಆಂಜನೇಯ ಉತ್ಸವಮೂರ್ತಿ, ರೋಡ್ ಆರ್ಕೆಸ್ಟ್ರಾ, ತಮಟೆ ವಾದ್ಯ, ತಾಲ್ಲೂಕಿನ ಭಜನಾ ತಂಡವರಿಂದ ಭಜನೆ ಮೆರುಗು ತಂದಿತು.

ಲೋಕ ಕಲ್ಯಾಣಾರ್ಥವಾಗಿ ನಡೆಸಿದ ಹೋಮದಲ್ಲಿ ಶಾಸಕ ಸಿ.ಎನ್. ಬಾಲಕೃಷ್ಣ,

ಪುರಸಭಾಧ್ಯಕ್ಷ ಸಿ.ಎನ್. ಮೋಹನ್ ದಂಪತಿ, ಕಾಂಗ್ರೆಸ್ ಮುಖಂಡ ಎಂ.ಎ. ಗೋಪಾಲಸ್ವಾಮಿ, ಪ್ರಸನ್ನ ಗಣಪತಿ ಸೇವಾ ಸಮಿತಿ ಅಧ್ಯಕ್ಷ ಸಿ.ಎನ್. ಅಶೋಕ್ ಪೂಜಾ ಕೈಂಕರ್ಯದಲ್ಲಿ ಪಾಲ್ಗೊಂಡಿದ್ದರು.

# ಭಾರತ್ ಸ್ಕೌಟ್ಸ್-ಗೈಡ್ಸ್ ಸೇವೆ ಶ್ಲಾಘನೀಯ: ಡಾ. ಮನುಕುಮಾರ್




ಹಾಸನ: ಹಾಸನಾಂಬ ಹಾಗೂ ಸಿದ್ದೇಶ್ವರ ಜಾತ್ರಾ ಮಹೋತ್ಸವದಲ್ಲಿ ಭಾರತ್ ಸ್ಕೌಟ್ಸ್-ಗೈಡ್ಸ್ ವಿದ್ಯಾರ್ಥಿಗಳ ಅತ್ಯಂತ ಶ್ಲಾಘನೀಯವಾದುದು. ಹಗಲು ರಾತ್ರಿ ಪಾಳಿ ಪದ್ಧತಿಯಲ್ಲಿ ರೋವರ್ಸ್- ರೇಂಜರ್ಸ್ ಸಲ್ಲಿಸುವ ಸೇವೆ ಸಾರ್ವಜನಿಕರ ಮನಗೆದ್ದಿದೆ ಎಂದು ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಡಾ. ಮನುಕುಮಾರ್ ಅಭಿಪ್ರಾಯಪಟ್ಟರು.

ನಗರದ ಜೈನ ಭವನದಲ್ಲಿ ಜಿಲ್ಲಾಡಳಿತ, ಭಾರತ್ ಸ್ಕೌಟ್ಸ್-ಗೈಡ್ಸ್, ಜಿಲ್ಲಾ ಸಂಸ್ಥೆ ವತಿಯಿಂದ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಸೇವಾ ಶಿಬಿರದಲ್ಲಿ ಮಾತನಾಡಿ, ಭಾರತ್ ಸ್ಕೌಟ್ಸ್-ಗೈಡ್ಸ್ ವಿದ್ಯಾರ್ಥಿಗಳು ನಲವತ್ತಕ್ಕೂ ಹೆಚ್ಚಿನ ಕೇಂದ್ರಗಳಲ್ಲಿ ದಿನಕ್ಕೆ ಎರಡು ಪಾಳಿಯಂತೆ ಮಕ್ಕಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಲಕ್ಷಾಂತರ ಭಕ್ತಾಧಿಗಳನ್ನು ಶಿಸ್ತಿನಿಂದ ಸರದಿ ಸಾಲಿನಲ್ಲಿ ಕಳಿಸುವುದರ ಜೊತೆಗೆ ಬಾಯಾರಿದ ಭಕ್ತರಿಗೆ ದಾಹ ನೀಗಿಸುವ, ವಯೋವೃದ್ಧರಿಗೆ ಆಸರೆಯಾಗುವ, ದಿವ್ಯಾಂಗರನ್ನು ಸುರಕ್ಷಿತವಾಗಿ ದರ್ಶನ ಮಾಡಿಸುವ ಕೆಲಸವನ್ನು ಬಹಳ ಅಚ್ಚುಕಟ್ಟಾಗಿ ಮಾಡುತ್ತಿದ್ದಾರೆ ಎಂದರು. ಜಿಲ್ಲಾ ಕಾರ್ಯದರ್ಶಿ ಸುರೇಶ್ ಗುರೂಜಿ ಮಾತನಾಡಿ, ಹಾಸನಾಂಬೆ ಸೇವಾ ಶಿಬಿರ ಪ್ರಾರಂಭಿಕ ವರ್ಷಗಳಲ್ಲಿ ಏಕಲವ್ಯ ರೋವರ್ಸ್ ಮುಕ್ತದಳದಿಂದ ನಡೆಯುತಿತ್ತು. ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಅವರ ಅತ್ಯಾಸಕ್ತಿ ಹಾಗೂ ಜಿಲ್ಲಾಡಳಿತದ ಸಹಕಾರದಿಂದ ಕಳೆದೆರಡು ವರ್ಷಗಳಿಂದ ರಾಜ್ಯ ಮಟ್ಟದ ಸೇವಾ ಶಿಬಿರವಾಗಿ ಪರಿವರ್ತನೆಯಾಯಿತು. ಪ್ರಸಕ್ತ ವರ್ಷದಲ್ಲಿ ರಾಜ್ಯ ಸಹಕಾರ್ಯದರ್ಶಿ ಎಲ್.ಟಿ.ಲೋಕೇಶ್ ಸಹಕಾರದಲ್ಲಿ ಶಿಬಿರ ಅತ್ಯಂತ ಯಶಸ್ವಿಯಾಗಿ ನಡೆಯುತ್ತಿದೆ ಎಂದರು.

ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ಆಯುಕ್ತ ಡಾ. ಮನುಕುಮಾರ್, ರಾಜ್ಯ ಸಹ ಕಾರ್ಯದರ್ಶಿ ಎಲ್.ಟಿ.ಲೋಕೇಶ್, ರೋವರ್ ರೇಂಜರ್ ವಿಭಾಗದ ಹೆಡ್ ಕ್ವಾರ್ಟರ್ ಕಮಿಷನರ್ ಡಾ. ಜಿ.ಡಿ.ನಾರಾಯಣ, ಜಿಲ್ಲಾ ಕಾರ್ಯದರ್ಶಿ ಸುರೇಶ್ ಗುರೂಜಿ, ರಾಜ್ಯ ಸಹಾಯಕ ಸಂಘಟನಾ ಆಯುಕ್ತೆ ಎಚ್.ಎಂ. ಪ್ರಿಯಾಂಕ, ಬೆಂಗಳೂರು ಎ.ಎಸ್.ಒ.ಸಿ. ನಿತಿನ್ ಅಮೀನ್, ಜಿಲ್ಲಾ ಖಜಾಂಚಿ ಆರ್.ಎಸ್.ರಮೇಶ್, ಏಕಲವ್ಯ ರೋವರ್ ನಾಯಕ ಆರ್.ಜಿ. ಗಿರೀಶ್ ಇತರರಿದ್ದರು.

# ಶಿಷ್ಟಾಚಾರ ವಾಹನ ನಿಯೋಜನೆಯಲ್ಲಿ ಅವ್ಯವಹಾರ : ದೇವರಾಜೇಗೌಡ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹಾಸನಾಂಬ ದರ್ಶನಕ್ಕೆ ಬರುವ ಗಣ್ಯವ್ಯಕ್ತಿಗಳನ್ನು ಕರೆದೊಯ್ಯುವ ಶಿಷ್ಟಾಚಾರ ವಾಹನಗಳ ನಿಯೋಜನೆಯಲ್ಲಿ ಭಾರೀ ಅವ್ಯವಹಾರ ನಡೆದಿದೆಯೆಂದು ಬಿಜೆಪಿ ಮುಖಂಡ ದೇವರಾಜೇಗೌಡ ಆರೋಪಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಕೇಂದ್ರಾಡಳಿತ ಪ್ರದೇಶಗಳಾದ ನಾಗಾಲ್ಯಾಂಡ್, ಡೆಹ್ರಾಡೂನ್ ಹಾಗೂ ಪಾಂಡಿಚೇರಿಯಲ್ಲಿ ನೋಂದಣಿಯಾಗಿರುವ ವಾಹನಗಳನ್ನು ಹಾಸನಾಂಬ ಮಹೋತ್ಸವಕ್ಕೆ ಬಳಸುತ್ತಿದ್ದಾರೆ. ಒಂದು ದೇಶ ಒಂದು ತೆರಿಗೆ ಯೋಜನೆಯಡಿ ಕೇಂದ್ರಾಡಳಿತ ಪ್ರದೇಶಗಳಲ್ಲಿ ಪ್ರವಾಸೋದ್ಯಮ ಪುನಶ್ಚೇತನಕ್ಕೆ ಆ ವಾಹನಗಳನ್ನು ಅಲ್ಲಿ ನಿಯೋಜಿಸಲಾಗಿದೆ. ಬೇರೆ ಪ್ರವಾಸಿ ಟ್ಯಾಕ್ಸಿಗಳಿಗೆ ವರ್ಷಕ್ಕೆ 1 ಲಕ್ಷ ರೂ. ತೆರಿಗೆ ವಿಧಿಸಿದರೆ ಈ ವಾಹನಗಳಿಗೆ ಕೇವಲ 15 ಸಾವಿರ ರೂ. ಪಾವತಿಸಬೇಕು. ಅವುಗಳು ಆ ರಾಜ್ಯಗಳ ಹೊರತುಪಡಿಸಿ ಬೇರೆ ಕಡೆಗೆ ಕೇವಲ 45 ದಿನ ಮಾತ್ರ ಸಂಚರಿಸಬೇಕು. ಜೊತೆಗೆ ಅಂತಹ ವಾಹನಗಳಲ್ಲಿ ಪ್ರವಾಸ ಮಾಡುವವರು ಕೇಂದ್ರಾಡಳಿತ ಪ್ರದೇಶದವರೇ ಆಗಿರಬೇಕು. ಆದರೆ




ಹಾಸನಾಂಬ ಉತ್ಸವಕ್ಕೆ ಆ ವಾಹನಗಳನ್ನು ತರಿಸಿಕೊಂಡಿದ್ದು ಚನ್ನರಾಯಪಟ್ಟಣದ ಉದ್ಯಮಿ. ನಕಲಿ ದಾಖಲಾತಿಗಳಿಂದ ವಾಹನ ನೋಂದಣಿ ಮಾಡಿಕೊಂಡಿರುವ ಆ ವ್ಯಕ್ತಿ ಸರ್ಕಾರಕ್ಕೆ ಲಕ್ಷಾಂತರ ರೂ. ನಷ್ಟವುಂಟು ಮಾಡಿದ್ದಾನೆ. ಅದರಲ್ಲಿ ಭಾರೀ ಭ್ರಷ್ಟಾಚಾರ ನಡೆದಿದೆ. ಆ ವಾಹನಗಳನ್ನು ಪರಿಗಣಿಸುವ ಬದಲು ಸ್ಥಳೀಯ ವ್ಯಾನ್‌ಗಳನ್ನೇ ನಿಯೋಜನೆ ಮಾಡಿಕೊಂಡಿದ್ದರೆ ಸರ್ಕಾರಕ್ಕೆ ಮತ್ತಷ್ಟು ತೆರಿಗೆ ಸಂಗ್ರಹವಾಗುತ್ತಿತ್ತು. ಗುತ್ತಿಗೆದಾರರಿಗೆ ಲಾಭ ಮಾಡಿಕೊಡುವ ಉದ್ದೇಶದಿಂದ ಅಧಿಕಾರಿ ಹಾಗೂ ರಾಜಕಾರಣಿಗಳು ಈ ತಂತ್ರ ಅನುಸರಿಸಿದ್ದಾರೆಂದು ಗಂಭೀರ ಆರೋಪ ಮಾಡಿದರು.

ಹಾಸನಾಂಬ ಹಾಗೂ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ನಗರವನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿದೆ. ನಗರದ ಎಲ್ಲಾ ಕಡೆ ಜನಪ್ರತಿನಿಧಿಗಳ ಫ್ಲೆಕ್ಸ್‌ಗಳು ರಾರಾಜಿಸುತ್ತಿವೆ. ಉಪವಿಭಾಗಾಧಿಕಾರಿ ಕಚೇರಿ, ಮಹಾನಗರ ಪಾಲಿಕೆ ಕಚೇರಿ ಎದುರೇ ಕಾಂಗ್ರೆಸ್ ನಾಯಕರ ಫ್ಲೆಕ್ಸ್ ಹಾಕಿರುವುದು ಸೌಂದರ್ಯಕ್ಕೆ ಧಕ್ಕೆ ತಂದಿದೆ. ಅಚ್ಚುಕಟ್ಟು ವ್ಯವಸ್ಥೆಯಿಂದ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿರುವ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರು ಅನಧಿಕೃತ ಫ್ಲೆಕ್ಸ್‌ಗಳ ತೆರವಿಗೆ ಕ್ರಮ ವಹಿಸಬೇಕೆಂದು ಆಗ್ರಹಿಸಿದರು.

# ಇಂದು ತೆಂಗು ಬೆಳೆ ರಕ್ಷಣೆ ಕುರಿತು ವಿಚಾರ ಸಂಕಿರಣ

ಚನ್ನರಾಯಪಟ್ಟಣ: ರೈತರ ಬೆಳೆಗಳ ಸಾಧಕ-ಬಾಧಕಗಳ ಕುರಿತು ಜನಪ್ರತಿನಿಧಿಗಳು ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕು. ಆ ನಿಟ್ಟಿನಲ್ಲಿ ಅ. 15 ರಂದು ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ ಎಂದು ಸಿಐಟಿಯು ಜಿಲ್ಲಾ ಉಪಾಧ್ಯಕ್ಷ ಗೊಲ್ಲರಹೊಸಹಳ್ಳಿ ಮಂಜುನಾಥ್ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ತಾಲ್ಲೂಕು ಹಾಗೂ ಜಿಲ್ಲೆಯಲ್ಲಿ ತೆಂಗು ಬೆಳೆ ಶೇ. 60ರಷ್ಟು ಹಾನಿಯಾಗಿದೆ. ನುಸಿರೋಗ ಕಾಂಡಕೋರಕ ರಸ ಸೋರುವಿಕೆ, ಕಪ್ಪುಳುವಿನ ಬಾಧೆ, ಬಿಳಿ ನೊಣದ ಕಾಟ ಈ ರೀತಿ ಕೀಟಬಾಧೆ ರೋಗಭಾದೆಯಿಂದ ಬೆಳೆ ಕುಸಿತವಾಗಿದೆ ಎಂದರು.

ಕೆಲವೊಮ್ಮೆ ಬೆಲೆ ಕುಸಿತವಾದರೆ ಇತ್ತೀಚಿಗೆ ಬೆಳೆಗೆ ಕುಸಿತವಾಗಿದೆ. ಒಟ್ಟಾರೆ ರೈತನಿಗೆ ಸಂಕಷ್ಟ ಸದಾ ಕಾಡುತ್ತಿದೆ. ಸರ್ಕಾರದ ಕೃಷಿ ನೀತಿಗಳು ಸಮರ್ಪಕವಾಗಿಲ್ಲದೆ ಇರುವುದರಿಂದ ಕೆಲವು ಇಲಾಖೆಗಳು ನಿಷ್ಕ್ರಿಯವಾಗಿವೆ. ರೈತರಿಗೆ ಮಾಹಿತಿ ನೀಡುವುದರ ಬದಲು ತಮ್ಮ ಇಲಾಖೆಯಲ್ಲಿ ಹಣ ಮಾಡುವ ನೀಚ ಬುದ್ದಿಗೆ ಅಧಿಕಾರಿಗಳು



ಇಳಿಯುತ್ತಿದ್ದಾರೆ.

ರೈತರು ಮಾಹಿತಿ ಕೊರತೆಯಿಂದ ಪರಿಹಾರ ಕಂಡುಹಿಡಿಯುವ ಬದಲು ದೇವರ ಮೊರೆ ಹೋಗುತ್ತಿದ್ದಾನೆ. 16ನೇ ಸಿಐಟಿಯು ರಾಜ್ಯ ಸಮ್ಮೇಳನದ ಅಂಗವಾಗಿ ತೆಂಗು ಬೆಳಗಾರರ ಸಮಸ್ಯೆಗಳು ಮತ್ತು ಪರಿಹಾರ ಕುರಿತು ವಿಚಾರ ಸಂಕಿರಣವನ್ನು ಅ. 15ರ ಬುಧವಾರ ಬೆಳಿಗ್ಗೆ 10 ಗಂಟೆಗೆ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಜಿಲ್ಲಾ ತೋಟಗಾರಿಕಾ ಉಪ ನಿರ್ದೇಶಕ ಎಚ್.ಆರ್. ಯೋಗೇಶ್ ಸಮಾರಂಭ ಉದ್ಘಾಟನೆ ನೆರವೇರಿಸುವರು. ರಾಜ್ಯ ಕಾರ್ಯದರ್ಶಿ ಬೆಲೆ ಕಾವಲು ಸಮಿತಿ ಶ್ರೀಕಾಂತ್ ಕೆಲಹಟ್ಟಿ ಅವರು, ಉಂಡೆ ಕೊಬ್ಬರಿ ವೈಜ್ಞಾನಿಕ ಬೆಲೆ ಮಾರುಕಟ್ಟೆ ಸಮಸ್ಯೆಗಳು ಮತ್ತು ಪರಿಹಾರ ಕುರಿತು ವಿಷಯ ಮಂಡಿಸಲಿದ್ದಾರೆ.

ಎರಡನೇ ವಿಷಯ ಮಂಡನೆಯನ್ನು ತೆಂಗು ಬೆಳೆಗಾರರ ಹೋರಾಟ ಸಮಿತಿ ಜಿಲ್ಲಾಧ್ಯಕ್ಷ ರಾಮಚಂದ್ರು ವಳ್ಗೆರೆಹಳ್ಳಿ ತಾಲ್ಲೂಕಿನ ತೆಂಗು ಬೆಳೆಗಾರರ ಸಮಸ್ಯೆ ಕುರಿತು ತಿಳಿಸಿಕೊಡಲಿದ್ದಾರೆ. ಬೆಂಗಳೂರು ನಿವೃತ್ತ ಡಿಜಿಎಂಕೆ ಓ.ಎಸ್. ಚೇತನ್ಯಾಕುಮಾರಿ, ಕರ್ನಾಟಕ ಪ್ರಾಂತ್ಯ ರೈತ ಸಂಘ ಜಿಲ್ಲಾಧ್ಯಕ್ಷ ಎಚ್.ಆರ್. ನವೀನ್‌ಕುಮಾರ್, ಸಹಾಯಕ ತೋಟಗಾರಿಕಾ ನಿರ್ದೇಶಕ ಮಂಜುನಾಥ್ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಿಐಟಿಯು ಹಾಸನ ಜಿಲ್ಲಾ ಉಪಾಧ್ಯಕ್ಷ ಎಚ್. ಎಸ್. ಮಂಜುನಾಥ್ ವಹಿಸಲಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಗೌರವಾಧ್ಯಕ್ಷ ಬರಗೂರು ಶಂಕರಣ್ಣ, ಪ್ರಧಾನ ಕಾರ್ಯದರ್ಶಿ ಜಯಚಂದ್ರ ಜಿನೇನಹಳ್ಳಿ, ಖಜಾಂಚಿ ತೇಜಸ್‌ಗೌಡ ಗೋವಿನಕರೆ, ಜೋಗಿಪುರ ಮಂಜು, ಮಹೇಶ್ ಉಪಸ್ಥಿತರಿದ್ದರು.

## ಇತಿಹಾಸದಲ್ಲಿ ಈ ದಿನ

### ಅಕ್ಟೋಬರ್-15

**1582:** ಗ್ರೆಗೋರಿಯನ್ ಕ್ಯಾಲೆಂಡರ್ ಪ್ರಥಮವಾಗಿ ಯೂರೋಪಿನ ಕೆಲವು ರಾಷ್ಟ್ರಗಳಲ್ಲಿ ಜಾರಿಗೆ ಬಂತು.

**1932:** ಟಾಟಾ ಏರ್ ಲೈನ್ಸ್ (ಈಗಿನ ಏರ್ ಇಂಡಿಯಾ) ಮೊದಲ ಪ್ರಯಾಣ ನಡೆಸಿತು.

**1951:** ಐ ಲವ್ ಲೂಸಿ ಎಂಬ ಅಮೇರಿಕಾದ ಪ್ರಸಿದ್ಧ ಟಿವಿ ಶೋ ಮೊದಲ ಬಾರಿಗೆ ಪ್ರಸಾರವಾಯಿತು.

**1994:** ಪ್ಯಾಲೆಸ್ಟೈನ್ ನಾಯಕ ಯಾಸರ್ ಅರಾಫಾತ್ ಮತ್ತು ಇಸ್ರೇಲ್ ನಾಯಕ ಯಿಜಾಕ್ ರಾಬಿನ್ ಹಾಗೂ ಶಿಮೋನ್ ಪೆರೆಸ್ ಅವರಿಗೆ ನೊಬೆಲ್ ಶಾಂತಿ ಪ್ರಶಸ್ತಿ ಘೋಷಿಸಲಾಯಿತು.

**ಜನನ**

**1931:** ಭಾರತದ ಮಾಜಿ ರಾಷ್ಟ್ರಪತಿ, ವಿಜ್ಞಾನಿ ಹಾಗೂ ಮಿಸೈಲ್ ಮ್ಯಾನ್ ಎಂದು ಹೆಸರಾದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ

**1844:** ಜರ್ಮನ್ ತತ್ವಜ್ಞ ಫ್ರೆಡ್ರಿಕ್ ನೀಟ್‌ಶೆ

**ಮರಣ**

**1982:** ಪ್ರಸಿದ್ಧ ಬ್ರಿಟಿಷ್ ಗಣಿತಜ್ಞ ಅನ್ನಿ ಮೆಕ್ಲಾರೆನ್

# ಬಿ. ಕಾಟಿಹಳ್ಳಿಯಲ್ಲಿ ಚಿರತೆ ಪ್ರತ್ಯಕ್ಷ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರ ಹೊರವಲಯದ ಬಿ.ಕಾಟಿಹಳ್ಳಿಯಲ್ಲಿ ಮಂಗಳವಾರ ಚಿರತೆ ಪ್ರತ್ಯಕ್ಷವಾಗಿದೆ. ರೈತರೊಬ್ಬರು ತೋಟದಲ್ಲಿ ಕೆಲಸ ಮಾಡುತ್ತಿದ್ದಾಗ ಬಾಯಲ್ಲಿ ಬೀದಿ ನಾಯಿಯೊಂದನ್ನು ಕಚ್ಚಿಕೊಂಡ ಚಿರತೆ ಧುತ್ತನೆ ಎದುರಾಗಿದೆ. ವ್ಯಕ್ತಿಯನ್ನು ನೋಡಿದ ಚಿರತೆ ನಾಯಿಯನ್ನು ಅಲ್ಲೇ ಬಿಟ್ಟು ಸ್ವಲ್ಪ ದೂರ ಓಡಿದೆ. ನಂತರ ಹತ್ತಿರದಲ್ಲೇ ಇದ್ದ ಹಲಸಿನ ಮರವೇರಲು ಎರಡು ಸಲ ಪ್ರಯತ್ನಿಸಿದೆ. ಅದು ಸಾಧ್ಯವಾಗದೆ ಇದ್ದಾಗ ಜಮೀನಿನೊಳಗೆ ಓಡಿದೆ. ಸ್ಥಳಕ್ಕಾಗಮಿಸಿದ ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್‌ಕುಮಾರ್ ಹಾಗೂ ಸಿಬ್ಬಂದಿ ಪರಿಶೀಲಿಸಿದರು. ಚಿರತೆಯ ಹೆಜ್ಜೆ ಗುರುತನ್ನು ಪತ್ತೆ ಹಚ್ಚಿರುವ ಅರಣ್ಯ ಇಲಾಖೆ ಅಧಿಕಾರಿಗಳು ಥರ್ಮಲ್ ಡ್ರೋನ್ ಮೂಲಕ ಶೋಧ ಕಾರ್ಯ ನಡೆಸಿತು. ಸಂಜೆ ವರೆಗೂ ಅದರ ಸುಳಿವು ಸಿಗದ ಹಿನ್ನೆಲೆಯಲ್ಲಿ ಜಿಪಿಎಸ್ ಕ್ಯಾಮರಾ ಟ್ರ್ಯಾಪ್ ಅಳವಡಿಸಲಾಗಿದೆ. ಸುತ್ತಲಿನ ಜಾಗದಲ್ಲಿ ಚಿರತೆ ಬಂದರೆ ಇಲಾಖೆಗೆ ಇಮೇಲ್ ಸಂದೇಶ ಬರಲಿದ್ದು ಬಳಿಕ ಮುಂದಿನ ಕಾರ್ಯಾಚರಣೆ ನಡೆಯಲಿದೆಯೆಂದು ಅಧಿಕಾರಿಗಳು ಹೇಳಿದ್ದಾರೆ.

# ಅಡಗೂರಿನಲ್ಲಿ ಬೃಹತ್ ರಕ್ತದಾನ ಶಿಬಿರ: ಸಿದ್ಧತೆ

## ಚೇತನ್ ಗುರೂಜಿ ಅವರಿಂದ 100ನೇ ಬಾರಿಗೆ ರಕ್ತದಾನ | ಆರೋಗ್ಯ ಶಿಬಿರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಬೇಲೂರು ತಾಲ್ಲೂಕು ಅಡಗೂರಿನ ಬಸವ ಯೋಗ ಕೇಂದ್ರದ ಮುಖ್ಯಸ್ಥ ಚೇತನ್ ಗುರೂಜಿ ಅವರ ನೇತೃತ್ವದಲ್ಲಿ ನ. 15ರ ಶನಿವಾರ ಅಡಗೂರಿನ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಬೃಹತ್ ರಕ್ತದಾನ ಹಾಗೂ ಆರೋಗ್ಯ ಶಿಬಿರ ಹಮ್ಮಿಕೊಳ್ಳಲಾಗಿದೆ.

ಚೇತನ್ ಗುರೂಜಿ ಅವರು ಕಳೆದ 20 ವರ್ಷಗಳಲ್ಲಿ 99 ಬಾರಿ ರಕ್ತದಾನ ಮಾಡಿದ್ದು 100ನೇ ಬಾರಿಯ ರಕ್ತದಾನಕ್ಕೆ ಬೃಹತ್ ವೇದಿಕೆ ಸೃಷ್ಟಿಸಿದ್ದಾರೆ. ತಾವು ರಕ್ತದಾನ ಮಾಡುವುದು ಮಾತ್ರವಲ್ಲದೆ ಬೇರೆಯವರಿಂದಲೂ ರಕ್ತದಾನದ ಮೂಲಕ 1 ಸಾವಿರ ಯೂನಿಟ್ ಸಂಗ್ರಹದ ಯೋಜನೆ ರೂಪಿಸಿದ್ದಾರೆ. ಇಪ್ಪತ್ತು ವರ್ಷಗಳ ಹಿಂದೆ ಆರಂಭವಾದ



ಬಸವ ಯೋಗ ಕೇಂದ್ರ ಕೇವಲ ಯೋಗಾಭ್ಯಾಸ, ಪ್ರಾಣಾಯಾಮಕ್ಕೆ ಸೀಮಿತವಾಗದೆ ರಕ್ತದಾನ ಶಿಬಿರ, ಪರಿಸರ ದಿನಾಚರಣೆ, ರಕ್ತದಾನ ಶಿಬಿರಗಳ ಮೂಲಕ ನಿರಂತರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ. ಇದುವರೆಗೆ 10 ಸಾವಿರ ಯೂನಿಟ್ (ಬಾಟಲಿ) ರಕ್ತ ಸಂಗ್ರಹ ಮಾಡಿರುವುದು ಹೆಗ್ಗಳಿಕೆಯೇ ಸರಿ. ನ. 15ರಂದು ರಕ್ತದಾನ ಶಿಬಿರದ ಜೊತೆಗೆ ಆರೋಗ್ಯ ತಪಾಸಣಾ ಶಿಬಿರ, ಕಣ್ಣಿನ ತಪಾಸಣೆ (ಅವಶ್ಯವಿದ್ದರೆ ಉಚಿತ ಶಸ್ತ್ರಚಿಕಿತ್ಸೆ), ದಂತ ತಪಾಸಣೆ, ಹೃದಯ ತಪಾಸಣೆಗಾಗಿ ಇಸಿಜಿ, ಎಕೋ ಪರೀಕ್ಷೆ ಹಮ್ಮಿಕೊಳ್ಳಲಾಗಿದೆ. ಹಾಸನದ ಅಮ್ಮ ಕಣ್ಣಿನ ಆಸ್ಪತ್ರೆ ವತಿಯಿಂದ ನೇತ್ರ ತಪಾಸಣೆ, ವಿ ಕೇರ್ ಸೂಪರ್ ಸ್ಪೆಷಾಲಿಟಿ ಡೆಂಟಲ್ ಕೇರ್‌ನಿಂದ ದಂತ ತಪಾಸಣೆ, ಮಣಿ ಹಾಗೂ ಇಂಡಿಯಾನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಿಂದ ಹೃದಯ, ಮಹಾಲಕ್ಷ್ಮಿ ಮಂಜಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯವರಿಂದ ಕೀಲು ಮತ್ತು ಮೂಳೆ ತಪಾಸಣೆ, ರಾಜೀವ್ ಆಯುರ್ವೇದ ಆಸ್ಪತ್ರೆಯಿಂದ ಆಯುರ್ವೇದ ಚಿಕಿತ್ಸೆ ಹಾಗೂ ಔಷಧಿ ವಿತರಣೆ ನಡೆಯಲಿದೆ. ಈ ಎಲ್ಲಾ ಆಸ್ಪತ್ರೆಗಳ ನುರಿತ ತಜ್ಞರು ಹಾಗೂ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು ಸಾರ್ವಜನಿಕರು ಉಚಿತವಾಗಿ ಸೌಲಭ್ಯ ಪಡೆಯಬಹುದು.

ಬಸವ ಯೋಗ ಕೇಂದ್ರದ ಚೇತನ್ ಗುರೂಜಿ ಅವರು ಕಳೆದ ಎರಡು ದಶಕಗಳಿಂದ ಸಾರ್ವಜನಿಕರಲ್ಲಿ ಆರೋಗ್ಯದ ಅರಿವು ಮೂಡಿಸುವುದಕ್ಕಾಗಿ ತಮ್ಮ ಜೀವನ ಸಮರ್ಪಿಸಿದ್ದಾರೆ. ಇದುವರೆಗೆ 400ಕ್ಕೂ ಅಧಿಕ ಯೋಗ ಶಿಬಿರ ನಡೆಸಿದ್ದಾರೆ. ಜನರಲ್ಲಿ ದೇಹದಾನ ಹಾಗು ನೇತ್ರದಾನದ ಅರಿವು ಮೂಡಿಸಿದ್ದು ಸುಮಾರು 40 ಜನರು ಇವರ ಪ್ರೇರಣೆಯಿಂದ ದೇಹ ಹಾಗೂ 200 ಜನರು ನೇತ್ರದಾನಕ್ಕೆ ಒಪ್ಪಿದ್ದಾರೆ. ಸರ್ಕಾರಿ ಕಾಲೇಜು, ಪೊಲೀಸ್ ಇಲಾಖೆ, ಸರ್ಕಾರಿ ಕಚೇರಿಗಳಿಗೆ ತೆರಳಿ ಯೋಗ ಹಾಗೂ ಸದೃಢ ಆರೋಗ್ಯದ ಕುರಿತು ಕಾರ್ಯಾಗಾರಗಳನ್ನು ನಿರಂತರವಾಗಿ ನಡೆಸುತ್ತಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248